# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1896 (1540)
ಸದಸ್ಯರ ಹೆಸರು : ಡಾ॥ ಚಂದ್ರಶೇಖರ್ ಬಿ.ಪಾಟೀಲ್ (ಪದವೀಧರರ ಕ್ಷೇತ್ರ)
ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು
ಉತ್ತರಿಸುವ ದಿನಾಂಕ : 15.03.2022

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆ ಹುಮನಾಬಾದ್ ಪಟ್ಟಣದ ಹೊರವಲಯದ ವ್ಯಾಪ್ತಿಯಲ್ಲಿ ಕೈಗಾರಿಕಾ ಪ್ರದೇಶದಿಂದ ಹಳ್ಳಕ್ಕೆ ರಾಸಾಯನಿಕ ತ್ಯಾಜ್ಯ ಹರಿಸುತ್ತಿರುವುದರಿಂದ ಸುತ್ತಮುತ್ತ ಹಳ್ಳಿಗಳ ಜನರಿಗೆ ಚರ್ಮ ಕಾಯಿಲೆ ಹಾಗೂ ಜಾನುವಾರುಗಳು ಸಾವನಪ್ಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; | ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯವರು ನಿಯಮಾನುಸಾರ ಕಾಲಕಾಲಕ್ಕೆ ಪರಿಶೀಲನೆ ಮಾಡುತ್ತಿರುತ್ತಾರೆ. ನ್ಯೂನತೆಗಳು ಕಂಡು ಬಂದ ಕೈಗಾರಿಕೆಗಳಿಗೆ ನೋಟಿಸ್ ಜಾರಿ ಮಾಡಿ ಸದರಿ ನ್ಯೂನ್ಯತೆಗಳನ್ನು ಸರಿಪಡಿಸಲು ಕ್ರಮವಹಿಸಲಾಗುತ್ತಿದೆ.<br>ಮುಂದುವರೆದು, ನ್ಯೂನ್ಯತೆಗಳನ್ನು ಸರಿಪಡಿಸದೇ ಇರುವ ಕೈಗಾರಿಕೆಗಳ ವಿರುದ್ಧ ಎನ್.ಪಿ.ಡಿ (Notice for Proposed Direction) ಜಾರಿ ಮಾಡಲು ವಲಯ ಕಛೇರಿಗೆ ಶಿಫಾರಸ್ಸು ಮಾಡಲಾಗುತ್ತಿದೆ ಎಂದು ಕೆ.ಎಸ್.ಪಿ.ಸಿ.ಬಿ, ಬೀದರ್ ಇವರು ವರದಿ ಸಲ್ಲಿಸಿರುತ್ತಾರೆ. |
| ಆ | ರಾಸಾಯನಿಕ ತ್ಯಾಜ್ಯ ಹಳ್ಳಕ್ಕೆ ಹರಿಯದಂತೆ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ? | ರಾಸಾಯನಿಕ ತ್ಯಾಜ್ಯ ಹಳ್ಳಕ್ಕೆ ಹರಿಯದಂತೆ ತಡೆಗಟ್ಟಲು ಸರ್ಕಾರದಿಂದ ಕೋಳಾರ್ ಕೈಗಾರಿಕಾ ಪ್ರದೇಶದಲ್ಲಿ ಸಾಮೂಹಿಕ ತ್ಯಾಜ್ಯ ಸಂಸ್ಕರಣಾ ಘಟಕವನ್ನು ಸ್ಥಾಪಿಸಲಾಗುತ್ತಿದೆ. ಸದರಿ ಕಾಮಗಾರಿಯು ಬಹುತೇಕ ಪೂರ್ಣಗೊಂಡಿದ್ದು, ಪ್ರಾಯೋಗಿಕ ಹಂತದಲ್ಲಿರುತ್ತದೆ. |

ಸಿಐ 70 ಎಸ್‌ಪಿಐ 2022

(ಡಾ॥ ಮುರುಗೇಶ ಆರ್. ನಿರಾಣಿ)
ಬೃಹತ್ ~~ಮತ್ತು~~ ಮಧ್ಯಮ ಕೈಗಾರಿಕೆ ಸಚಿವರು